ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ8[5]ಶಾ.ಶಿ.ಅ:ಹೆ.ಶಿ.ಸ್ಥ/11/2016-17 ದಿನಾಂಕ: 12.07.2016

: ತಿದ್ದುಪಡಿ ಜ್ಞಾಪನ :

ವಿಷಯ: 2016-17ನೇ ಸಾಲಿನ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿನ ಹೆಚ್ಚುವರಿ ಶಿಕ್ಷಕರುಗಳನ್ನು ಗುರುತಿಸಿ, ಕಾರ್ಯಭಾರವಿರುವ ಪ್ರೌಢಶಾಲೆಗಳಿಗೆ ಮರುಹೊಂದಾಣಿಕೆ ಮಾಡುವ ಕುರಿತು.

ಉಲ್ಲೇಖ: 1] ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ.200.ಪಿ.ಎಂ.ಸಿ. 99 ದಿನಾಂಕ: 03.02.2000

2] ಸರ್ಕಾರದ ಆದೇಶದ ಸಂಖ್ಯೆ ಇಡಿ.10.ಎಸ್.ಎಲ್.ಬಿ.2001 ದಿ: 16.01.2001

3] ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ:137:ಎಸ್‌ಇಪಿ:2000, ದಿ:23.01.2002.

4] ಸರ್ಕಾರದ ಆದೇಶ ಸಂಖ್ಯೆ:ಇಡಿ:69:ಎಸ್‌ಓಹೆಚ್:2011, ದಿ:31.03.2011.

5] ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 23.06.2016

6] ಸರ್ಕಾರದ ಆದೇಶ ಸಂಖ್ಯೆ: ಇಡಿ.1.ಎಸ್.ಇ.ಪಿ.2011 ದಿನಾಂಕ: 16.07.2014

ಉಲ್ಲೇಖ [1]ರಿಂದ [4]ರವರೆಗಿನ ಸರ್ಕಾರಿ ಸುತ್ತೋಲೆಗಳನ್ನು ಆಧರಿಸಿ 2016-17ನೇ ಸಾಲಿನ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ನಿಗದಿತ ಕಾರ್ಯಭಾರವಿಲ್ಲದ ಶಿಕ್ಷಕರನ್ನು ಹೆಚ್ಚುವರಿ ಎಂದು ಗುರುತಿಸಿ, ಕಾರ್ಯಭಾರವಿರುವ ಶಾಲೆಗಳಿಗೆ ಸ್ಥಳಾಂತರಿಸುವ ಪ್ರಕ್ರಿಯೆಗೆ ಸಂಬಂಧಿಸಿದಂತೆ ಈ ಕಛೇರಿಯಿಂದ ಉಲ್ಲೇಖ [5]ರನ್ವಯ ಸುತ್ತೋಲೆಯನ್ನು ಹೊರಡಿಸಲಾಗಿದೆ.

ಸದರಿ ಸುತ್ತೋಲೆಯಲ್ಲಿನ ಕಂಡಿಕೆ 03ರ " ತೃತೀಯ ಶೀರ್ಷಿಕೆಯಡಿ "ಯಲ್ಲಿ " ಒಂದು ವೇಳೆ ನಿಮ್ಮ ಕಛೇರಿಯಲ್ಲಿ ಆಡಳಿತ ಮಂಡಳಿಯವರು ಖಾಲಿ ಹುದ್ದೆಗಳಿಗೆ ಭರ್ತಿ ಮಾಡುವ ಸಂಬಂಧ ಪ್ರಸ್ತಾವನೆಗಳು ಬಾಕಿ ಇದ್ದಲ್ಲಿ ಅಂತಹ ಪ್ರಸ್ತಾವನೆಗಳನ್ನು ಈ ಕಛೇರಿಗೆ ಸಲ್ಲಿಸದೆ ಆ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರ ಪ್ರಕ್ರಿಯೆಗೆ ಬಳಸಿಕೊಳ್ಳಲು ಹಾಗೂ ಈ ಕಛೇರಿಯಲ್ಲಿ ಅಂತಹ ಪ್ರಸ್ತಾವನೆಗಳಿದ್ದಲ್ಲಿ ಅವುಗಳಿಗೆ ಅನುಮತಿ ನೀಡದೆ ಹಿಂತಿರುಗಿಸುವ ಪ್ರಕ್ರಿಯೆಯನ್ನು ಮಾಡಲಾಗುವುದೆಂದು " ತಿಳಿಸಲಾಗಿತ್ತು.

ಈ ವಿಚಾರದಲ್ಲಿ ಆಡಳಿತ ಮಂಡಳಿಯವರು ಉಲ್ಲೇಖ [6]ರ ಸರ್ಕಾರದ ಆದೇಶದಂತೆ ಖಾಲಿ ಹುದ್ದೆಗಳಿಗೆ ಭರ್ತಿ ಮಾಡಿಕೊಳ್ಳಲು ಅನುಮತಿ ಕೋರಿ ಪ್ರಸ್ತಾವನೆಗಳನ್ನು ಇಲಾಖೆಗೆ ಸಲ್ಲಿಸಿದ್ದಲ್ಲಿ ಅಂತಹ ಪ್ರಸ್ತಾಪಿತ ಖಾಲಿ ಹುದ್ದೆಗಳನ್ನು ಹೊರತುಪಡಿಸಿ ಉಳಿದ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರ ಪ್ರಕ್ರಿಯೆಗೆ ಬಳಸಿಕೊಳ್ಳಲು ಅನುಮತಿ ನೀಡಿದೆ. ಉಳಿದಂತೆ ಉಲ್ಲೇಖ [5]ರ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

" ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ "

ನಿರ್ದೇಶಕರು [ಪ್ರೌಢ ಶಿಕ್ಷಣ]

01. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ, ಇವರಿಗೆ ಕಳುಹಿಸುತ್ತಾ, ತಮ್ಮ ಆಯುಕ್ತಾಲಯ ವ್ಯಾಪ್ತಿಯಲ್ಲಿರುವ ಹೆಚ್ಚುವರಿ ಶಿಕ್ಷಕರುಗಳನ್ನು ಗುರುತಿಸುವ ಬಗ್ಗೆ ಮೇಲ್ಕಂಡಂತೆ ಕ್ರಮವಹಿಸಲು ತಿಳಿಸಿದೆ.

02 . ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಕಳುಹಿಸುತ್ತಾ, ಸಂಬಂಧಿಸಿದ ಆಡಳಿತ ಮಂಡಳಿಯ ಮುಖ್ಯಸ್ಥರಿಗೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಮ್ಮ ಹಂತದಲ್ಲಿಯೇ ಮೇಲ್ಕಂಡ ಸುತ್ತೋಲೆಯಲ್ಲಿನ ಅಂಶಗಳನ್ನು ಕಟ್ಟು ನಿಟ್ಟಾಗಿ ಪಾಲಿಸುವ ಬಗ್ಗೆ ಕ್ರಮವಹಿಸಲು ತಿಳಿಸಿದೆ.

04. ಈ ಕಛೇರಿಯ ಇ-ಗೌವರ್ನೆನ್ಸ್ ಶಾಖೆಗೆ ಕಳುಹಿಸುತ್ತಾ ಸದರಿ ಸುತ್ತೋಲೆಯನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸಲು ಮತ್ತು ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ ಇ-ಮೇಲ್ ಮೂಲಕ ಕಳುಹಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

05 .ಕಛೇರಿ ಪ್ರತಿ.

\\10.96.135.22\e\e\est2\est2\exess teachers 2014.doc